# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2704
ಸದಸ್ಯರ ಹೆಸರು : ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 25.03.2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯಿತಿಯಲ್ಲಿ ಪಿ.ಡಿ.ಓ ಮತ್ತು ಕಾರ್ಯದರ್ಶಿಗಳ ಎರಡೂ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ತಾಲ್ಲೂಕಿನ ಇತರೆ ಗ್ರಾಮ ಪಂಚಾಯಿತಿ ಪಿ.ಡಿ.ಓ ಮತ್ತು ಕಾರ್ಯದರ್ಶಿಗಳನ್ನು ನಿಯೋಜಿಸಿರುವುದರಿಂದ ಸದರಿ ಅಧಿಕಾರಿ/ನೌಕರರು ಸರಿಯಾದ ಸಮಯದಲ್ಲಿ ಕಛೇರಿ ಕೆಲಸಗಳನ್ನು ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಾರ್ವಜನಿಕ ಮತ್ತು ಆಡಳಿತಾತ್ಮಕ ಕೆಲಸ ಕಾರ್ಯಗಳಿಗೆ ಅಡಚಣೆಯಾಗದಂತೆ ಮದ್ದೂರು ತಾಲ್ಲೂಕು ಬಿದರಕೋಟೆ ಗ್ರಾಮ ಪಂಚಾಯಿತಿ ಹೆಚ್ಚುವರಿ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಶ್ರೀಮತಿ ಎಂ.ಎಲ್.ಸುಮಲತಾ ರವರು ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಕಾರ್ಯದರ್ಶಿಯಾಗಿ ಶ್ರೀಮತಿ ಸಿ.ಸುಮಾವತಿರವರಿಗೆ ಕರ್ತವ್ಯ ನಿರ್ವಹಿಸಲು ಸೂಚಿಸಲಾಗಿದೆ. |
| (ಇ) | ಈ ಪಿ.ಡಿ.ಓ ಮತ್ತು ಕಾರ್ಯದರ್ಶಿಗಳು ಸರಿಯಾಗಿ ಕಛೇರಿಗೆ ಹಾಜರಾಗದಿರುವುದರಿಂದ ಬಿದರಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಅಭಿವೃದ್ಧಿ ಕಾರ್ಯಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | |
| (ಈ) | ಸದರಿ ಗ್ರಾಮ ಪಂಚಾಯಿತಿಗೆ ಪಿ.ಡಿ.ಓ ಮತ್ತು ಕಾರ್ಯದರ್ಶಿ ಹುದ್ದೆಗಳಿಗೆ ಎಷ್ಟು ದಿನಗಳೊಳಗಾಗಿ ನೇಮಕ ಮಾಡಲಾಗುವುದು? (ಮಾಹಿತಿಯನ್ನು ನೀಡುವುದು) | ಬಿದರಕೋಟೆ ಗ್ರಾಮ ಪಂಚಾಯತಿಯ ಖಾಯಂ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ತುಮಕೂರು ಜಿಲ್ಲೆಗೆ ನಿಯೋಜನೆ ಮಾಡಿರುವುದನ್ನು ರದ್ದುಪಡಿಸಿ ಬಿದರಕೋಟೆ ಗ್ರಾಮ ಪಂಚಾಯತಿಗೆ ನೇಮಿಸಲು ಹಾಗೂ ಖಾಲಿ ಇರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗೆ ನಿಯಮಾನುಸಾರ ಬಡ್ತಿ ನೀಡುವ ಸಂದರ್ಭದಲ್ಲಿ ನೇಮಿಸಲು ಕ್ರಮವಹಿಸಲಾಗುವುದು. |

ಗ್ರಾಅಪ 163 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.